ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬೃ.ಬೆಂ.ಮ.ಪಾ/ಕಾ.ಪಾ.ಅ/ಯ.ವ/ಆ.ಅ/31 /21-22

ಕಾರ್ಯಪಾಲಕ ಅಭಿಯಂತರು(ವಿದ್ಯುತ್) ರವರ ಕಛೇರಿ
ಬೃ.ಬೆಂ.ಮ.ಪಾ, ಯಲಹಂಕ ವಲಯ
ಬಳ್ಳಾರಿ ರಸ್ತೆ, ಬೆಂಗಳೂರು-32.
ದಿನಾಂಕ: 07/03/2022

ಆಡಳಿತಾತ್ಮಕ ಅನುಮೋದನೆ

ವಿಷಯ:- *Upgradation and repairing of Park lights in 4th cross and 6th main 5th phase & Parks in Yelahanka ward no-3*

ಉಲ್ಲೇಖ:- 1. ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/20-21, ದಿನಾಂಕ:04-02-2021 ರ ಮೇರೆಗೆ ಕಾಮಗಾರಿ ಸಂಕೇತ ನಿರೀಕ್ಷಿಸಿ.

2. ಮಾನ್ಯ ಮುಖ್ಯ ಆಯುಕ್ತರು ರವರ ಆದೇಶ ಸಂಖ್ಯೆ:ವಿಆ(ಹ)/ಪಿಆರ್/77/2021-22, ದಿನಾಂಕ:14.06.2021 ರ ಆಯವ್ಯಯಕ್ಕೆ ಸಂಬಂಧಿಸಿದ ಆದೇಶ.

3. ಅಂದಾಜು ಮೊತ್ತ: ರೂ.೩.೫೦ ಲಕ್ಷಗಳು

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಯಲಹಂಕ ವಲಯರವರು ಈ ಕೆಳಗಿನ ಕಾಮಗಾರಿಗೆ 2021-22 ನೇ ಸಾಲಿನ ಅಯವ್ಯಯದ ಲೆಕ್ಕ ಶಿರ್ಷಿಕೆ-**P0973** ಅಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಯಲಹಂಕ ವಲಯ ವಿದ್ಯುತ್ ವಿಭಾಗಕ್ಕೆ 2021-22 ನೇ ಸಾಲಿನ ಪಿ.ಓ.ಡಬ್ಲ್ಯೂ ಅನುದಾನದಡಿಯಲ್ಲಿ ಕೆ.ಪಿ.ಡಬ್ಲ್ಯೂಡಿ. 2019-20 ವಿದ್ಯುತ್ (ಎಸ್.ಆರ್) ದರಗಳ ಹಾಗೂ ಅನುಮೋದಿತ ದರಗಳ ಅನ್ವಯ ಅಂದಾಜು ಪಟ್ಟಿಯನ್ನು ತಯಾರಿಸಿ, ಮಾನ್ಯ ಮುಖ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರು 2021-22 ನೇ ಸಾಲಿನ ವಿದ್ಯುತ್ ಕ್ರಿಯಾ ಯೋಜನೆಯನ್ನು ಮಾನ್ಯ ಆಡಳಿತಗಾರರಿಂದ ನಿರೀಕ್ಷಿಸಿ ಅನುಮೋದಿಸಿರುವ ಮೇರೆಗೆ ಸದರಿ ಕಾಮಗಾರಿ ಕೆಲಸಕ್ಕೆ ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಉಲ್ಲೇಖ (01) ರಂತೆ ನೀಡಿರುವ ಅಧಿಕಾರದನ್ವಯ ಉಲ್ಲೇಖ (02) ರಂತೆ ಮೇಲಿನ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದೆ.

ಆಡಳಿತಾತ್ಮಕ ಮಂಜೂರಾತಿ ಪುಸ್ತಕದ ಪುಟ ಸಂಖ್ಯೆ-112&113 ಕ್ರಮಸಂಖ್ಯೆ: 31 ರಲ್ಲಿ ಸಮೂದಿಸಲಾಗಿದೆ.

ಈ ಮೇಲ್ಕಂಡ ಅಂದಾಜುಪಟ್ಟಿಗೆ ಕೆಳಗೆ ಸಮೂದಿಸಿರುವ ಷರತ್ತುಗಳನ್ನು ಪಾಲಿಸುವ ನಿಬಂಧನೆಯೊಂದಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ.1.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು
2. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಲಾಗ್ ಪುಸ್ತಕದಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕಾರ್ಯ ಚಟುವಟಿಕೆಗಳ ಬಗ್ಗೆ ದಾಖಲೆ ರೂಪದಲ್ಲಿ ಸಮೂದಿಸಿಕೊಳ್ಳುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು(ವಿ)
ಬಿಬೆಂಪಾ, ಯಲಹಂಕ ವಲಯ

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯರವರ ಮಾಹಿತಿಗಾಗಿ.